# ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ನ್ಯಾಯಾಲಯ, ಕಲಘಟಗಿ

**ಸಿಸಿ ನಂ 223/2024**

**ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 26-03-2026 ರಂದು ಪ್ರಮಾಣ ಮಾಡಿಸಲಾಯಿತು**

| | | | |
|---|---|---|---|
| **ಸಾಕ್ಷಿಯ ಹೆಸರು** | ಃ ತುಕಾರಾಮ ಗಿಡದಹುಬ್ಬಳ್ಳಿ | **ಪ್ರಾ.ಸಾ ಃ 04** | |
| **ತಂದೆ ಃ ಗಂಡ ಹೆಸರು** | ಃ ಮಹಾದೇವಪ್ಪ | **ಚಾ.ಸಾ ಃ 06** | |
| **ವಯಸ್ಸು** | ಃ 32 ವರ್ಷ | | |
| **ಉದ್ಯೋಗ** | ಃ ವ್ಯವಸಾಯ | | |
| **ವಾಸಸ್ಥಳ** | ಃ ತುಮರಿಕೊಪ್ಪ | | |

**<u>ಮುಖ್ಯ ವಿಚಾರಣೆ ಃ ಮಾನ್ಯ ಸ.ಸ.ಅ. ರವರಿಂದಃ</u>**

ಚಾಸಾ-1 ನನ್ನ ಅಕ್ಕ. ಚಾಸಾ-4, 5, 7 ರಿಂದ 15 ರವರ ಪರಿಚಯ ಇದೆ. ನನಗೆ ಆರೋಪಿತರ ಪರಿಚಯ ಇದೆ.

ದಿನಾಂಕ 07.03.2023 ರಂದು ಹೋಳಿ ಹುಣ್ಣಿಮ ಪ್ರಯುಕ್ತ ಆರೋಪಿತರು ಓಣಿಯಲ್ಲಿ ಓಕಳಿ ಆಡುತ್ತಾ ಒಂದು ಸಲ ಹಾದು ಹೋಗಿರುತ್ತಾರೆ. ಆ ಸಮಯದಲ್ಲಿ ಚಾಸಾ-4 ರವರ ಜೊತೆಗೆ ಜಗಳ ಮಾಡಿದ್ದರು. ಆ ಸಮಯದಲ್ಲಿ ಜಗಳ ಮುಗಿಸಿದ್ದು ಪುನಃ ಆರೋಪಿತರು ಎಲ್ಲರೂ ಸೇರಿಕೊಂಡು ಓಕಳಿ ಆಡುತ್ತಾ ನಮ್ಮ ಓಣಿಯಲ್ಲಿ ಬಂದಿರುತ್ತಾರೆ. ಆ ಸಮಯದಲ್ಲಿ ಚಾಸಾ-4 ರವರು ಅಂಗಡಿ ಮುಂದೆ ನಿಂತಿದ್ದು ಆಗ ಆರೋಪಿತರು ಎಲ್ಲರೂ ಸೇರಿಕೊಂಡು ಚಾಸಾ-4 ರವರಿಗೆ ಹೊಡೆಯುತ್ತಿದ್ದರು. ಚಾಸಾ-10 ಮತ್ತು 12 ರವರು ಅಂಗಡಿ ಹತ್ತಿರ ಕುಳಿತಿದ್ದು ಚಾಸಾ-4 ರವರು ಬಿಡಿಸಲು ಹೋದಾಗ ಆರೋಪಿತರು ಎಲ್ಲರೂ ಸೇರಿಕೊಂಡು ನಮ್ಮ ಅಣ್ಣ ಚಾಸಾ-12 ರವರನ್ನು ಹೊಡೆಯಲು ಪ್ರಾರಂಭಿಸಿರುತ್ತಾರೆ. ನಾನು, ಚಾಸಾ-5 ಹಾಗೂ 9 ರವರು ಜಗಳ ಬಿಡಿಸಲು ಹೋದಾಗ ಆರೋಪಿತರು ಚಾಸಾ-8 ರವರಿಗೆ ಕಲ್ಲಿನಿಂದ ಹೊಡೆದಿರುತ್ತಾರೆ. ನನ್ನ ತಲೆ ಹಿಂಬಾಗದಲ್ಲಿ ಕಲ್ಲಿನಿಂದ ಹೊಡೆದು ರಕ್ತಗಾಯ ಪಡಿಸಿರುತ್ತಾರೆ. ನಾನು ಪ್ರಜ್ಞೆ ತಪ್ಪಿದ್ದರಿಂದ ನನ್ನನ್ನು ಆಸ್ಪತ್ರೆಗೆ ದಾಖಲಿಸಿರುತ್ತಾರೆ. ಈ ಬಗ್ಗೆ ಚಾಸಾ-1 ರವರು ಪೋಲೀಸರ ಮುಂದೆ ದೂರು ನೀಡಿರುತ್ತಾರೆ. ಜಗಳ ಆಗುವಾಗ ಚಾಸಾ-7 ರಿಂದ 15 ರವರು ಹಾಜರಿದ್ದರು. ಜಗಳ 6-30 ಕ್ಕೆ ಆಗಿರುತ್ತದೆ. ನನ್ನೊಂದಿಗೆ ಚಾಸಾ-5, 8 ಮತ್ತು 9 ರವರಿಗೆ ಗಾಯಗಳಾಗಿದ್ದು ಅವರನ್ನು ಸಹ ಆಸ್ಪತ್ರೆಗೆ ದಾಖಲಿಸಿದ್ದರು. ಘಟನೆಗೆ ಸಂಬಂಧಿಸಿದಂತೆ ಪೋಲೀಸರ ಮುಂದೆ ಹೇಳಿಕೆ ನೀಡಿದ್ದೇನೆ. ನನ್ನ ಮೇಲೆ ಹಲ್ಲೆ ಮಾಡಿದ ವ್ಯಕ್ತಿಗಳನ್ನು ನೋಡಿದರೆ ಗುರುತಿಸುತ್ತೇನೆ. ನ್ಯಾಯಾಲಯದ ಮುಂದೆ ಇರುವ ಆರೋಪಿತರನ್ನು ನೋಡಿ ಸಾಕ್ಷಿ ಗುರುತಿಸಿರುತ್ತಾರೆ. ನಮ್ಮ ಮೇಲೆ ಹಲ್ಲೆಗೆ ಉಪಯೋಗಿಸಿದ ಕಟ್ಟಿಗೆ ಹಾಗೂ ಕಲ್ಲುಗಳನ್ನು ನೋಡಿದರೆ ಗುರುತಿಸುತ್ತೇನೆ. ಮುದ್ದೆಮಾಲು-1 ಮತ್ತು 2 ನ್ನು ಸಾಕ್ಷಿ ಗುರುತಿಸಿರುತ್ತಾರೆ.

***(ಮಾನ್ಯ ಸ.ಸ.ಅ ಯವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ,*** ಪಾಟೀ ಸವಾಲಿಗೆ ಅನುಮತಿಸಿದೆ)

**<u>ಪಾಟೀ ಸವಾಲುಃ ಮಾನ್ಯ ಸ.ಸ.ಅ. ರವರಿಂದಃ</u>**

ಜಗಳ ಆಗುವಾಗ ನಾನು, ಚಾಸಾ-5, 7 ರಿಂದ 13 ರವರು ಜಗಳ ಬಿಡಿಸಲು ಹೋಗಿದ್ದೆವು ಅಂದರೆ ನಿಜ. ಆರೋಪಿತರು ಜಗಳ ಬಿಡಿಸಲು ನೀವು ಯಾರು ಇದರಲ್ಲಿ

ಬರಬೇಡಿ ಎಂದು ನಮಗೆ ಅವಾಚ್ಯ ಶಬ್ದಗಳಿಂದ ಬೈದು ಕಳುಹಿಸಿರುತ್ತಾರೆ ಅಂದರೆ ನಿಜ. ಚಾಸಾ-8 ರವರು ತಂಟೆ ಮಾಡಬೇಡರಿ, ಎಲ್ಲರೂ ಸೇರಿಕೊಂಡು ಬಿಡಿಸೋಣ ಎಂದು ಹೇಳಿದರೂ ಕೂಡಾ ಆರೋಪಿತರು ಕೇಳಲಿಲ್ಲ ಅಂದರೆ ನಿಜ. ಆರೋಪಿತರು ತಮ್ಮ ಕೈಗಳಲ್ಲಿ ಬಡಿಗೆ ಹಾಗೂ ಕಲ್ಲುಗಳನ್ನು ಹಿಡಿದುಕೊಂಡಿದ್ದು 1 ನೇ ಆರೋಪಿ ಚಾಸಾ-8 ರವರ ನಿನಗೆ ಸೊಕ್ಕು ಬಹಳ ಇದೆ ಸೂಳೆಮಗನೆ ಎಂದು ತನ್ನ ಕೈಯಲ್ಲಿದ್ದ ಕಲ್ಲಿನಿಂದ ಎದೆಗೆ ಹೊಡೆದಿರುತ್ತಾನೆ ಅಂದರೆ ನಿಜ. 2 ನೇ ಆರೋಪಿ ಜಗಳ ಬಿಡಿಸಲು ಬಂದ ಚಾಸಾ-5 ರವರಿಗೆ ಕಲ್ಲಿನಿಂದ ಕಾಲಿಗೆ ಹೊಡೆದು ರಕ್ತಗಾಯ ಪಡಿಸಿರುತ್ತಾನೆ ಅಂದರೆ ನಿಜ. ನನ್ನ ತಲೆಗೆ 2 ನೇ ಆರೋಪಿ ಕಲ್ಲಿನಿಂದ ತಲೆಗೆ ಹೊಡೆದು ರಕ್ತಗಾಯ ಪಡಿಸಿರುತ್ತಾನೆ ಅಂದರೆ ನಿಜ. ಉಳಿದ ಆರೋಪಿತರು ತಮ್ಮ ಕೈಗಳಿಂದ ಹೊಡಿ ಬಡಿ ಮಾಡಿರುತ್ತಾರೆ ಅಂದರೆ ನಿಜ.

2 ನೇ ಆರೋಪಿ ಚಾಸಾ-1 ರವರ ಸೀರೆ ಹಿಡಿದು ಎಳೆದಾಡಿ ಸಾರ್ವಜನಿಕವಾಗಿ ಮಾನಭಂಗ ಮಾಡಿರುತ್ತಾನೆ ಹಾಗೂ ಅವಾಚ್ಯ ಶಬ್ದಗಳಿಂದ ಬೈದಿರುತ್ತಾನೆ ಅಂದರೆ ನಿಜ. ಚಾಸಾ-11 ರವರಿಗೆ 1 ನೇ ಆರೋಪಿ ಬಡಿಗೆಯಿಂದ ಹಲ್ಲೆ ಮಾಡಿರುತ್ತಾನೆ ಅಂದರೆ ನಿಜ. ಉಳಿದ ಆರೋಪಿತರು ತಮ್ಮ ಕೈಯಿಂದ, ಬಡಿಗೆಯಿಂದ ಚಾಸಾ-7 ರವರಿಗೆ ಮೈಕೈಗಳಿಗೆ ಹಲ್ಲೆ ಮಾಡಿರುತ್ತಾರೆ ಅಂದರೆ ನಿಜ. 3 ನೇ ಆರೋಪಿಯು ಚಾಸಾ-9 ರವರ ಮೇಲೆ ಬಡಿಗೆಯಿಂದ ಹಲ್ಲೆ ಮಾಡಿರುತ್ತಾನೆ ಅಂದರೆ ನಿಜ. 4 ನೇ ಆರೋಪಿ ಬಡಿಗೆಯಿಂದ ಚಾಸಾ-10 ರವರ ಮೇಲೆ ಹಲ್ಲೆ ಮಾಡಿರುತ್ತಾನೆ ಅಂದರೆ ನಿಜ. 7 ನೇ ಆರೋಪಿಯು ಚಾಸಾ-13 ರವರಿಗೆ ತನ್ನ ಕೈಯಲ್ಲಿದ್ದ ಬಡಿಗೆ ಹಾಗೂ ಕೈಯಿಂದ ಹಲ್ಲೆ ಮಾಡಿರುತ್ತಾನೆ ಅಂದರೆ ನಿಜ. 5 ಮತ್ತು 6 ನೇ ಆರೋಪಿತರು ತಮ್ಮ ಕೈಯಲ್ಲಿ ಇದ್ದ ಬಡಿಗೆಯಿಂದ ಚಾಸಾ-12 ರವರಿಗೆ ಕೈಗಳಿಂದ ಮತ್ತು ಬಡಿಗೆಗಳಿಂದ ಹೊಡೆದು ಗಾಯ ಪಡಿಸಿರುತ್ತಾರೆ ಅಂದರೆ ನಿಜ. 1 ಮತ್ತು 2 ನೇ ಆರೋಪಿತರು ಚಾಸಾ-1 ರವರ ಮೈಮೇಲೆ ಹಲ್ಲೆ ಮಾಡಿ ಸೀರೆ ಹಿಡಿದು ಎಳೆದಾಡಿ ಮಾನಭಂಗ ಮಾಡಿರುತ್ತಾರೆ ಅಂದರೆ ನಿಜ. ಆರೋಪಿತರು ಅವಾಚ್ಯ ಶಬ್ದಗಳಿಂದ ಬೈಯುತ್ತಿದ್ದರು ಅಂದರೆ ನಿಜ. ಚಾಸಾ-14 ಮತ್ತು 15 ರವರು ಜಗಳ ಬಿಡಿಸಿಕೊಂಡಿರುತ್ತಾರೆ ಅಂದರೆ ನಿಜ. ಆರೋಪಿತರು ಹೋಗುವಾಗ ಈಗ ಉಳಿದುಕೊಂಡಿದ್ದಿರಿ ಇನ್ನೊಮ್ಮೆ ಸಿಕ್ಕರೆ ಬಿಡುವುದಿಲ್ಲ ಎಂದು ಜೀವ ಬೆದರಿಕೆ ಹಾಕಿರುತ್ತಾರೆ ಅಂದರೆ ನಿಜ.

**ಪಾಟೀ ಸವಾಲುಃ ಆರೋಪಿತರ ಪರಃ**

ಪಾಟೀ ಸವಾಲಿಗೆ ಕಾಲಾವಕಾಶ ಕೋರುತ್ತಿದ್ದು ಕಾಲಾವಕಾಶ ನೀಡಲಾಯಿತು.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)**

**ಓ ಹೇ ಕೆ ಸರಿ ಇದೆ.**

**ಹಿರಿಯ ದಿವಾಣಿ ನ್ಯಾಯಾಧೀಶರು,**
**ಕಲಘಟಗಿ.**